# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **458**

ಸದಸ್ಯರ ಹೆಸರು : ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 19-07-2024

ಉತ್ತರಿಸುವ ಸಚಿವರು : ಮಾನ್ಯ ಇಂಧನ ಸಚಿವರು

***

| | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ರೈತರ ಕೃಷಿ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಸಂಪರ್ಕ ಪಡೆಯಲು ಮತ್ತು ವಿದ್ಯುತ್ ಪರಿವರ್ತಕಗಳನ್ನು ಅಳವಡಿಸಿಕೊಳ್ಳಲು ತಗಲುವ ವೆಚ್ಚಗಳನ್ನು ರೈತರೇ ಭರಿಸುತ್ತಿದ್ದು, ಇಂಧನ ಇಲಾಖೆಯಿಂದ ವಿಧಿಸುತ್ತಿರುವ ದರಗಳು ಬಹಳ ತುಟ್ಟಿಯಾಗಿರುವುದರಿಂದ ಬಡ ವರ್ಗದ ರೈತರು ತೊಂದರೆಗೊಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ರಾಜ್ಯದಲ್ಲಿ ನೀರಾವರಿ ಪಂಪ್‌ಸೆಟ್‌ಗಳನ್ನು ವಿದ್ಯುತ್ ಜಾಲಕ್ಕೆ ವ್ಯವಸ್ಥಿತವಾಗಿ ಸೇರ್ಪಡೆಗೊಳಿಸಲು ಮತ್ತು Stand-alone/off grid ಪಂಪ್ ಅಳವಡಿಕೆ ಹಾಗೂ IP set feeder ಗಳ ಸೌರೀಕರಣವನ್ನು ಅನುಷ್ಠಾನಗೊಳಿಸಿ ರೈತರ ಪಂಪ್‌ಸೆಟ್‌ಗಳಿಗೆ ಹಗಲಿನ ವೇಳೆಯಲ್ಲಿಯೇ ವಿದ್ಯುತ್ ಒದಗಿಸುವ ನಿಟ್ಟಿನಲ್ಲಿ ಎನರ್ಜಿ/214/ವಿಎಸ್‌ಸಿ/2023 ದಿನಾಂಕ:07.10.2023 ರಂದು ಆದೇಶವನ್ನು ಹೊರಡಿಸಲಾಗಿದ್ದು, ಅದರಂತೆ ಪಂಪ್‌ಸೆಟ್‌ಗಳು ಹಾಲಿ ಇರುವ ವಿದ್ಯುತ್ ಜಾಲದಿಂದ 500 ಮೀಟರ್‌ಯಿಂದಾಚೆಯಿದ್ದಲ್ಲಿ, Solar Stand-alone/off grid ಪಂಪ್ ಅಳವಡಿಸಲು ಕ್ರಮ ವಹಿಸಲಾಗುತ್ತಿದೆ ಮತ್ತು 500 ಮೀಟರ್ ಒಳಗಿರುವ ಪಂಪ್‌ಸೆಟ್‌ಗಳಿಗೆ ಕನಿಷ್ಠ ಅವಶ್ಯಕತೆಗೆ ತಕ್ಕಂತೆ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ವಿದ್ಯುತ್ ಸರಬರಾಜು ಕಂಪನಿಗಳು ಕ್ರಮ ವಹಿಸುತ್ತಿವೆ.<br>ಸೌರ ಪಂಪ್‌ಸೆಟ್‌ಗಳನ್ನು ಉತ್ತೇಜಿಸಲು ಕೇಂದ್ರ ಸರ್ಕಾರದಿಂದ ಶೇ.30 ರಷ್ಟು ಸಹಾಯಧನ ಅಲ್ಲದೆ ರಾಜ್ಯ ಸರ್ಕಾರದಿಂದ ಶೇ.30 ರಷ್ಟು ಇರುವ ಸಹಾಯಧನವನ್ನು ಶೇ.50 ಕ್ಕೆ ಹೆಚ್ಚಿಸಿ ಸರ್ಕಾರ ಅನುಮೋದಿಸಿದೆ. ರೈತರು ಈಗಾಗಲೇ ವಿದ್ಯುತ್ ಸಂಪರ್ಕಕ್ಕಾಗಿ ಮೊತ್ತವನ್ನು ಪಾವತಿಸಿದ್ದರೆ, ಪಾವತಿಸಿದ ಮೊತ್ತವನ್ನು ರೈತರ ವಂತಿಗೆ ಎಂದು ಪರಿಗಣಿಸಿ, ಸೌರ ಪಂಪ್‌ಸೆಟ್‌ಗಳನ್ನು ಅಳವಡಿಸಬೇಕಾಗಿದೆ.<br>ದಿನಾಂಕ:22.09.2023ರ ನಂತರ ಕಲ್ಪಿಸಲು ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಗಳನ್ವಯ ಆಯಾ ಎಸ್ಕಾಂಗಳಿಂದ ಅಗತ್ಯ ಕ್ರಮ ವಹಿಸಲಾಗುವುದು. |
| ಆ) | ಬಂದಿದ್ದಲ್ಲಿ, ರೈತರ ಕೃಷಿ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಸಂಪರ್ಕ ಪಡೆಯಲು ಮತ್ತು ವಿದ್ಯುತ್ ಪರಿವರ್ತಕಗಳನ್ನು ಅಳವಡಿಸಿಕೊಳ್ಳಲು ತಗಲುವ ವೆಚ್ಚಗಳಿಗೆ ಕೃಷಿ ಇಲಾಖೆಯಿಂದ ಸಹಾಯಧನ ನೀಡುವಂತಹ ಯೋಜನೆಯನ್ನು ಜಾರಿಗೆ ತರುವ ಚಿಂತನೆ ಸರ್ಕಾರಕ್ಕಿದೆಯೇ? (ಮಾಹಿತಿ ನೀಡುವುದು) | ರೈತರ ಕೃಷಿ ಪಂಪ್ ಸೆಟ್ ಗಳಿಗೆ ವಿದ್ಯುತ್ ಸಂಪರ್ಕ ಪಡೆಯಲು ಮತ್ತು ವಿದ್ಯುತ್ ಪರಿವರ್ತಕಗಳನ್ನು ಅಳವಡಿಸಿಕೊಳ್ಳಲು ತಗುಲುವ ವೆಚ್ಚಗಳಿಗೆ ಕೃಷಿ ಇಲಾಖೆಯಿಂದ ಸಹಾಯಧನ ನೀಡುವಂತಹ ಯೋಜನೆಯನ್ನು ಜಾರಿಗೆ ತರುವ ಚಿಂತನೆ ಸದ್ಯಕ್ಕೆ ಕೃಷಿ ಇಲಾಖೆಯ ಮುಂದಿರುವುದಿಲ್ಲ. |

ಸಂಖ್ಯೆ: ಎನರ್ಜಿ 212 ಸಿಓಆರ್‌ಡಿ 2024

(ಕೆ.ಜೆ.ಜಾರ್ಜ್)
ಇಂಧನ ಸಚಿವರು